## ಸಂಸದೀಯ ಮೌಲ್ಯ ಚಿಂತನ ಮಂಥನದಲ್ಲಿ ಸಿಎಂ ಹೇಳಿಕೆ

# ಪ್ರತಿನಿಧಿಗಳು ಜನರ ಧ್ವನಿಯಾಗಲಿ

25-2-2021

■ **ವಿಕ ಸುದ್ದಿಲೋಕ** ಬೆಂಗಳೂರು

ವಿಧಾನಮಂಡಲದಲ್ಲಿ ಅಹಿತಕರ ಘಟನೆ ನಡೆಯಬಾರದು. ಸುಗಮ ಕಲಾಪ ನಡೆಯುವಂತೆ ನೋಡಿಕೊಳ್ಳುವ ಜವಾಬ್ದಾರಿ ಎಲ್ಲರ ಮೇಲಿದೆ. ಜನಪ್ರತಿನಿಧಿಗಳು ಜನರ ಧ್ವನಿಯಾಗಬೇಕು. ಶೋಷಿತರು, ದಮನಿತರ ಪರವಾಗಿ ಕೆಲಸ ಮಾಡಬೇಕು. ಜನರಿಂದ ಆಯ್ಕೆಯಾಗಿ ಬಂದವರಿಗೆ ಜನಹಿತವೇ ಮುಖ್ಯವಾಗಬೇಕು ಎಂದು ಸಿಎಂ ಬಿ.ಎಸ್. ಯಡಿಯೂರಪ್ಪ ಹೇಳಿದ್ದಾರೆ.

ಕಾಮನ್‌ವೆಲ್ತ್ ಸಂಸದೀಯ ಸಂಘದ ಕರ್ನಾಟಕ ಶಾಖೆ ಬ್ಯಾಂಕ್ವೆಟ್ ಹಾಲ್‌ನಲ್ಲಿ ಬುಧವಾರ ಆಯೋಜಿಸಿದ್ದ 'ಸಂಸದೀಯ ಮೌಲ್ಯಗಳ ಕುಸಿತವನ್ನು ತಡೆಗಟ್ಟುವ ನಿಟ್ಟಿನಲ್ಲಿ ಒಂದು ಆತ್ಮಾವಲೋಕನ' ಕಾರ್ಯಕ್ರಮ ಉದ್ಘಾಟಿಸಿ, ''ಈ ಹಿಂದಿನ ರಾಜಕೀಯ ಮುತ್ಸದ್ದಿಗಳು ದೇಶಕ್ಕಾಗಿ ನಾವು ಎಂಬ ಭಾವನೆಯಲ್ಲಿದ್ದರು. ನಂತರ ಬಂದವರು ದೇಶವಿರುವುದೇ ನಮಗೆ ಎನ್ನುವ ಭಾವನೆಯಲ್ಲಿದ್ದಾರೆ,'' ಎಂದು ಬೇಸರ ವ್ಯಕ್ತಪಡಿಸಿದರು.

''ಸದನದಲ್ಲಿ ಅಹಿತಕರ ಘಟನೆಗಳು ನಡೆಯದಂತೆ ನಾವುಗಳು ಎಚ್ಚರಿಕೆ ವಹಿಸುವುದು ಅಗತ್ಯ. ಜನಪ್ರತಿನಿಧಿಗಳು ದಿಕ್ಕುತಪ್ಪಿದರೆ ಪ್ರಜಾಪ್ರಭುತ್ವದ ಆಶಯ ಜಾರಿ ಅಸಾಧ್ಯ. ಗಾಂಧೀಜಿಯವರ ಸರ್ವೋದಯದ ಕಲ್ಪನೆಗೆ ಪೂರಕವಾಗಿ ನಡೆದುಕೊಳ್ಳುವ ಅನಿವಾರ್ಯತೆಯಿದೆ. ಬಸವಣ್ಣ ಹಾಕಿಕೊಟ್ಟ ಮಾರ್ಗದಲ್ಲಿ ಸಾಗುವ ಅಗತ್ಯವಿದೆ,'' ಎಂದರು.

**ಪುಣ್ಯದ ಕೆಲಸ**

ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಮಾತನಾಡಿ, ''ರಾಜಕಾರಣವೆಂದರೆ ಜನಸೇವೆಯ ಮಾಧ್ಯಮ. ರಾಜಕಾರಣಕ್ಕೆ ಬರುವುದೂ ಪುಣ್ಯದ ಕೆಲಸವೇ. ನೂರರಲ್ಲಿ ಹತ್ತು ಮಂದಿಗಷ್ಟೇ ಈ ಅವಕಾಶ ದೊರಕಬಹುದು. ಜನಪ್ರತಿನಿಧಿಗಳು ಮಾದರಿಯಾಗಿ ಮತ್ತು ಜನರ ಧ್ವನಿಯಾಗಬೇಕು,'' ಎಂದು ಕಿವಿಮಾತು ಹೇಳಿದರು.

''ಸಂವಿಧಾನದ ಚೌಕಟ್ಟಿನಲ್ಲಿ ಆಡಳಿತ ನಡೆಸುವುದಕ್ಕೆ ರಾಜ್ಯವು ಮೇಲ್ಪಂಕ್ತಿ ಹಾಕಿಕೊಡಬೇಕು. ಮುಂದೊಂದು ದಿನ ಅರಾಜಕತೆ ಬಾರದಂತೆ ವಿಶ್ವಮಟ್ಟದಲ್ಲಿ ಇಂತಹ ಚರ್ಚೆಗಳು ನಡೆಯುತ್ತಿವೆ,'' ಎಂದರು.

ಚಿಂತಕ ಗುರುರಾಜ ಖರ್ಜಗಿ ಮಾತನಾಡಿ, ''ಜನರಿಗೆ ಜನಪ್ರತಿನಿಧಿಗಳು ಮಾದರಿಯಾಗಬೇಕು. ಈಗಿನ ಸನ್ನಿವೇಶ ನೋಡಿದರೆ ಬೇಸರವಾಗುತ್ತದೆ. ಮೌಲ್ಯಗಳನ್ನು ಕಾಪಾಡಿಕೊಳ್ಳಲು ಜನಪ್ರತಿನಿಧಿಗಳು ಗಮನ ಹರಿಸಬೇಕು. ಜನರನ್ನು ಯಾವಾಗಲೂ ಹಿಡಿದಿಟ್ಟುಕೊಳ್ಳಲು ಸಾಧ್ಯವಿಲ್ಲ. ಜನರ ಆಕ್ರೋಶದ ಕಟ್ಟೆ ಯಾವಾಗ ಬೇಕಾದರೂ ಒಡೆಯಬಹುದು,'' ಎಂದು ಎಚ್ಚರಿಸಿದರು.

ಸಭಾಪತಿ ಬಸವರಾಜ ಹೊರಟ್ಟಿ, ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ, ಪರಿಷತ್ ಪ್ರತಿಪಕ್ಷದ ನಾಯಕ ಎಸ್. ಆರ್.ಪಾಟೀಲ್, ಸಚಿವರಾದ ಜಗದೀಶ ಶೆಟ್ಟರ್, ಅರವಿಂದ ಲಿಂಬಾವಳಿ, ಮಾಜಿ ಸಭಾಪತಿಗಳಾದ ಬಿ.ಎಲ್.ಶಂಕರ್, ವಿ. ಆರ್.ಸುದರ್ಶನ್, ಮಾಜಿ ಸ್ಪೀಕರ್‌ಗಳಾದ ಕೆ.ಆರ್.ರಮೇಶ್ ಕುಮಾರ್, ಕೆ.ಜಿ.ಬೋಪಯ್ಯ ಮತ್ತಿತರರು ಭಾಗಿಯಾಗಿದ್ದರು.



ಬೆಂಗಳೂರಿನಲ್ಲಿ 'ಸಂಸದೀಯ ಮೌಲ್ಯಗಳ ಕುಸಿತ ಆತ್ಮಾವಲೋಕನ' ದಲ್ಲಿ ಸಿಎಂ ಯಡಿಯೂರಪ್ಪ, ಸ್ಪೀಕರ್ ಕಾಗೇರಿ, ಸಭಾಪತಿ ಹೊರಟ್ಟಿ, ಪ್ರತಿಪಕ್ಷ ನಾಯಕರಾದ ಸಿದ್ದರಾಮಯ್ಯ, ಎಸ್. ಆರ್. ಪಾಟೀಲ್ ಉಪಸ್ಥಿತರಿದ್ದರು.

## ಚುನಾವಣೆ ವ್ಯವಸ್ಥೆ ಬದಲಾಗಬೇಕು

ಚುನಾವಣೆ ವ್ಯವಸ್ಥೆ ಬದಲಾಗದೆ ಹೊರತೂ ಸಂವಿಧಾನದ ಮೌಲ್ಯಗಳ ಕುಸಿತ ತಪ್ಪಿಸಲು ಸಾಧ್ಯವಿಲ್ಲ ಎಂದು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಹೇಳಿದರು.

''ವರ್ಷದಲ್ಲಿ 60 ದಿನಗಳ ಕಾಲ ಕಲಾಪ ನಡೆಯಬೇಕು ಎಂಬ ನಿಯಮಕ್ಕೆ ಬದ್ಧರಾಗಿ ಎಲ್ಲರೂ ನಡೆದುಕೊಳ್ಳಬೇಕು. ಅರಸು ಸಿಎಂ ಆಗಿದ್ದಾಗ ಕರ್ನಾಟಕ ಭೂ ಸುಧಾರಣಾ ಕಾಯಿದೆಗೆ ತಿದ್ದುಪಡಿಗೂ ಮೊದಲು ಪೂರ್ವಭಾವಿಯಾಗಿ ವಿಧಾನ ಮಂಡಲದಲ್ಲಿ ಭಾರಿ ಚರ್ಚೆ ನಡೆದಿತ್ತು. ಈಗ ತರಾತುರಿಯಲ್ಲಿ ಕಾನೂನುಗಳಾಗುತ್ತವೆ. ಯಾವುದೇ ಕಾನೂನು ಜಾರಿಗೆ ತರುವ ಮುನ್ನ ಚರ್ಚೆಗೆ ಅವಕಾಶ ಸಿಗಲೇಬೇಕು. ಅವಸರದಲ್ಲಿ ಅಂಗೀಕಾರ ಮಾಡಿ ಸುಗ್ರೀವಾಜ್ಞೆ ಜಾರಿಗೆ ತರುವ ಅಭ್ಯಾಸ ಒಳ್ಳೆಯದಲ್ಲ,'' ಎಂದರು.

''ಶಾಸಕರು ಒಂದು ಪಕ್ಷದಿಂದ ಮತ್ತೊಂದು ಪಕ್ಷಕ್ಕೆ ಜಿಗಿಯುವುದನ್ನು ತಪ್ಪಿಸಲು ಕಾನೂನು (ಹತ್ತನೇ ಷೆಡ್ಯೂಲ್)ಇದ್ದರೂ ಶಾಸಕರು ರಂಗೋಲಿ ಕೆಳಗೆ ನುಸುಳುತ್ತಾರೆ. ಚುನಾವಣಾ ವ್ಯವಸ್ಥೆಯಲ್ಲಿ ಬದಲಾವಣೆ ತರದಿದ್ದರೆ ಸಂವಿಧಾನದ ಮೌಲ್ಯಗಳು ಕುಸಿಯುವುದನ್ನು ತಪ್ಪಿಸಲು ಸಾಧ್ಯವಿಲ್ಲ. ಚುನಾವಣೆಯಲ್ಲಿ ಮತ ಕೇಳಬೇಕಾದರೆ ಹಣ ಕೊಡಲೇಬೇಕು. ಕ್ರಿಮಿನಲ್‌ಗಳು, ಶ್ರೀಮಂತರು, ಹೊಡಿ ಬಡಿ ಸಂಸ್ಕೃತಿಯವರು ಕಣಕ್ಕಿಳಿಯುತ್ತಿದ್ದಾರೆ. ಚುನಾವಣೆ ಎಂದರೆ ವ್ಯಾಪಾರ, ಹರಾಜು ಎನ್ನುವಂತಾಗಿದೆ. ಹೀಗಾಗಿ ಚುನಾವಣಾ ವ್ಯವಸ್ಥೆ ದಿಕ್ಕಾಪಾಲಾಗಿದೆ. ವಾಟಾಳ್ ನಾಗರಾಜ್ ಶಾಸಕರಾಗಿದ್ದಾಗ ಬೆಳಗ್ಗೆ ಬಂದರೆ ಕಲಾಪ ಮುಗಿಯುವವರೆಗೆ ಹೋಗುತ್ತಿರಲಿಲ್ಲ. ಸಚಿವರೇ ಈಗ ಕಲಾಪದಲ್ಲಿ ಭಾಗವಹಿಸುವುದಿಲ್ಲ. ಇನ್ನು ಶಾಸಕರಿಗೆ ಬುದ್ಧಿ ಹೇಳುವುದಾದರೂ ಹೇಗೆ? ಸಂಸದೀಯ ಮೌಲ್ಯಗಳ ರಕ್ಷಣೆ ಮತ್ತು ಪ್ರಜಾಪ್ರಭುತ್ವದ ಉಳಿವಿನ ಬಗ್ಗೆ ಗಂಭೀರವಾದ ಚಿಂತನೆ ನಡೆಯಬೇಕು. ಸರ್ವಾಧಿಕಾರಿ ಮನಸ್ಥಿತಿ ನಮ್ಮಿಂದ ದೂರ ಆಗಬೇಕು,'' ಎಂದು ತಿಳಿಸಿದರು.